ಸಂಪುಟ: 22, ಸಂಚಿಕೆ: 166, ಪುಟಗಳು: 8,ಬುಧವಾರ, 26 ಮಾರ್ಚ್ 2025 RNI NO. KARKAN/2002/08054
epaper: www.sanjemugilu.com

ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3

**ಸುಭಾಷಿತ**

ಸಮರ್ಥವಾದ ಯೋಜನೆ, ಅದಕ್ಕೆ ತಕ್ಕ ಪರಿಶ್ರಮವಿದ್ದರೆ ಯಶಸ್ಸು ದಕ್ಕಲೇಬೇಕು.

**ಪಂಚಾಂಗ**

(ಬುಧವಾರ 26 ಮಾರ್ಚ್-2025)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ಉತ್ತರಾಯಣ, ಶಿಶಿರ ಋತು,
- ಫಾಲ್ಗುಣ ಮಾಸ, ಕೃಷ್ಣಪಕ್ಷ,
- ತಿಥಿ: ದ್ವಾದಶಿ • ನಕ್ಷತ್ರ: ಧನಿಷ್ಠ
- ರಾಹುಕಾಲ: 12:29 ರಿಂದ 2:00
- ಗುಳಿಕಕಾಲ: 10:58 ರಿಂದ 12:29
- ಯಮಗಂಡಕಾಲ: 7:56 ರಿಂದ 9:27

## ಸಂಕ್ಷಿಪ್ತ ಸುದ್ದಿ

### 9ನೇ ತರಗತಿ ವಿದ್ಯಾರ್ಥಿಯನ್ನು ಅಪಹರಿಸಿ ಕೊಲೆ ಮಾಡಿದ ಸ್ನೇಹಿತರು

**ನವದೆಹಲಿ:** ಸ್ನೇಹಿತರೇ ತನ್ನ ಸ್ನೇಹಿತನನ್ನು ಅಪಹರಿಸಿ ಕೊಲೆ ಮಾಡಿರುವ ಘಟನೆ ನವದೆಹಲಿಯ ವಜೀರಾಬಾದ್ ಪ್ರದೇಶದಲ್ಲಿ ನಡೆದಿದೆ. ಸ್ನೇಹಿತರೆಂದರೆ ಪ್ರಾಣಕ್ಕೆ ಪ್ರಾಣ ಕೊಡುವವರು ಎಂದು ಹೇಳುತ್ತಾರೆ, ಆದರೆ ಪ್ರಾಣ ತೆಗೆದ ಇಂಥವರು ಎಂಥಾ ಸ್ನೇಹಿತರು. 9ನೇ ತರಗತಿ ವಿದ್ಯಾರ್ಥಿಯನ್ನು ಅಪಹರಿಸಿ ಫೋನ್ ಮೂಲಕ ಕುಟುಂಬದವರ ಬಳಿ 10 ಲಕ್ಷ ರೂ. ಗೆ ಬೇಡಿಕೆ ಇಟ್ಟಿದ್ದರು. ಆದರೆ ಪ್ರಕರಣ ಭಾರಿ ತಿರುವು ಪಡೆದುಕೊಂಡಿದೆ. ಬಾಲಕನನ್ನು ಭಲ್ವಾ ಸರೋವರದ ಬಳಿಯ ನಿರ್ಜನ ಸ್ಥಳಕ್ಕೆ ಕರೆದೊಯ್ದು, ಅಲ್ಲಿ ಹಲವು ಬಾರಿ ಇರಿದು, ಶವವನ್ನು ಎಸೆದು ಹೋಗಿದ್ದಾರೆ. ಮೃತನ ದೇಹದಲ್ಲಿ ಹಲವಾರು ಇರಿತದ ಗಾಯಗಳಿದ್ದು, ಇದು ಹಿಂಸಾತ್ಮಕ ದಾಳಿಯನ್ನು ಸೂಚಿಸುತ್ತದೆ ಎಂದು ಪೊಲೀಸರು ತಿಳಿಸಿದ್ದಾರೆ. ತನಿಖೆಯ ನಂತರ ದೆಹಲಿ ಪೊಲೀಸರು ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರು ಶಂಕಿತರನ್ನು ಬಂಧಿಸಿದ್ದಾರೆ. ಪುಟ 2

### ಎಂಬಿಎ ಪದವೀಧರೆ ಪಿ.ಜಿಯಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ



**ಬೆಳಗಾವಿ:** ಎಂಬಿಎ ಪದವೀಧರೆಯೊಬ್ಬಳು ಪಿ.ಜಿಯಲ್ಲಿ ನೇಣು ಬಿಗಿದು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಕುಂದಾನಗರಿ ಬೆಳಗಾವಿಯಲ್ಲಿ ನಡೆದಿದೆ. ವಿಜಯಪುರ ಜಿಲ್ಲೆಯ ಐಶ್ವರ್ಯ ಆತ್ಮಹತ್ಯೆ ಮಾಡಿಕೊಂಡ ಯುವತಿ. ವಿಜಯಪುರದಲ್ಲಿಯೇ ಎಂಬಿಎ ಪದವಿ ಓದಿದ್ದ ಐಶ್ವರ್ಯ ಕೆಲಸಕ್ಕಾಗಿ ಬೆಳಗಾವಿಗೆ ಬಂದಿದ್ದಳು. ಪುಟ 2

## ವಿಜಯೇಂದ್ರ, ಯತ್ನಾಳ್ ಟೀಂಗೆ 'ಹೈ' ಶಾಕ್

### ಐವರು ನಾಯಕರಿಗೆ ಶಿಸ್ತು ಸಮಿತಿಯಿಂದ ಶೋಕಾಸ್ ನೋಟಿಸ್

**ನವದೆಹಲಿ:** ರಾಜ್ಯ ಬಿಜೆಪಿಯಲ್ಲಿ ಬಣ ಬಡಿದಾಟ ಜೋರಾಗಿದೆ. ರಾಜ್ಯಧ್ಯಕ್ಷ ಬಿ.ವೈ ವಿಜಯೇಂದ್ರ ವಿರುದ್ಧ ಯತ್ನಾಳ್ ಟೀಂ ಬಂಡಾಯ ಸಾರಿದರೆ, ಇತ್ತ ಯತ್ನಾಳ್ ಟೀಂ ವಿರುದ್ಧ ಬಿಎಸ್‌ವೈ ಟೀಂ ಸಮರ ಸಾರಿದೆ. ಈ ನಡುವೆ ಅಕ್ಕಿ ಮೇಲಾಸೆ ನೆಂಟರ ಮೇಲೆ ಪ್ರೀತಿ ಎಂಬಂತೆ ಬಿಜೆಪಿಯಲ್ಲಿದ್ದು ಕಾಂಗ್ರೇಸ್ ಪರ ಮಾತನಾಡುವ ಮತ್ತೊಂದು ಗುಂಪು. ಈ ಗುಂಪುಗಾರಿಕೆಯಿಂದ ಬೇಸತ್ತ ಹೈಕಮಾಂಡ್ ಒಂದೇ ಕಲ್ಲಿಗೆ ಮೂರು ಹಕ್ಕಿ ಹೊಡೆಯುವ ನಿರ್ಧಾರಕ್ಕೆ ಬಂದಿದ್ದು, ಬಿಜೆಪಿಯ ಐವರು ನಾಯಕರಿಗೆ ಶೋಕಾಸ್ ನೋಟಿಸ್ ನೀಡಿದೆ.

ರಾಜ್ಯ ಬಿಜೆಪಿ ಮನೆಯೊಂದು ಮೂರು ಬಾಗಿಲಾಗಿದೆ. ಒಂದು ಕಡೆ ರಾಜ್ಯಧ್ಯಕ್ಷ ಬಿ.ವೈ ವಿಜಯೇಂದ್ರ ವಿರುದ್ಧ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಸಮರ ಸಾರಿದರೇ ವಿಜಯೇಂದ್ರ ಪರ ನಿಂತಿರುವ ಕೆಲವು ಶಾಸಕರು ಯತ್ನಾಳ್ ಗ್ಯಾಂಗ್ ವಿರುದ್ಧ ವಾಗ್ಯುದ್ಧ ನಡೆಸುತ್ತಿದ್ದಾರೆ. ಮತ್ತೊಂದು ಕಡೆ ಬಿಜೆಪಿಯಲ್ಲೇ ಇದ್ದು ಕಾಂಗ್ರೆಸ್ ಪರ ಬ್ಯಾಟಿಂಗ್ ಮಾಡುತ್ತಿರುವ ಗುಂಪು ಆಕ್ಟಿವ್ ಆಗಿದೆ. ಇದರಿಂದ ಬೇಸತ್ತ ಹೈಕಮಾಂಡ್ ಒಂದೇ ಕಲ್ಲಿಗೆ ಮೂರು ಹಕ್ಕಿ ಹೊಡೆಯುವ ನಿರ್ಧಾರಕ್ಕೆ ಬಂದಿದೆ.

ಹೌದು, ರಾಜ್ಯ ಬಿಜೆಪಿಯಲ್ಲಿರುವ ಬಣ ರಾಜಕೀಯಕ್ಕೆ ಇತಿಶ್ರೀ ಹಾಡಲು ಮುಂದಾಗಿರುವ ಬಿಜೆಪಿ ಹೈಕಮಾಂಡ್ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಬಳಿಕ ಐದು ಮಂದಿ ಪುಟ 2

### ಬೆಟ್ಟಿಂಗ್ ಆಪ್ ಕೇಸ್ | 'ಕೈ' ನಾಯಕ ಭೂಪೇಶ್ ಬಘೇಲ್

## ಮನೆ ಮೇಲೆ ಸಿಬಿಐ ದಾಳಿ



**ರಾಯ್ಪುರ್:** ಮಹಾದೇವ್ ಬೆಟ್ಟಿಂಗ್ ಆಪ್ ಪ್ರಕರಣದಲ್ಲಿ ಮಹತ್ವದ ಬೆಳವಣಿಗೆ ನಡೆದಿದೆ. ಛತ್ತಿಸ್‌ಗಢದ ಮಾಜಿ ಸಿಎಂ ಹಾಗೂ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಭೂಪೇಶ್ ಬಘೇಲ್ ಅವರ ನಿವಾಸದ ಮೇಲೆ ಕೇಂದ್ರೀಯ ತನಿಖಾ ದಳ ಇಂದು ಬೆಳಗ್ಗೆ ದಾಳಿ ನಡೆಸಿದೆ.

ಮೂಲಗಳ ಪ್ರಕಾರ, ಸಿಬಿಐ ಅಧಿಕಾರಿಗಳ ತಂಡ ರಾಯ್‌ಪುರ ಮತ್ತು ಭಿಲಾಯಿ ಎರಡೂ ಪ್ರದೇಶದಲ್ಲಿರುವ ಬಘೇಲ್ ನಿವಾಸದ ಮೇಲೆ ದಾಳಿನಡೆಸಿದ್ದಾರೆ ಎಂದು ತಿಳಿದುಬಂದಿದೆ.

ಕಳೆದ ಮಾರ್ಚ್ 10 ರಂದು ಇದೇ ಪ್ರಕರಣಕ್ಕೆ ಸಂಬಂಧಿಸಿದಂತೆ ಭೂಪೇಶ್ ಬಘೇಲ್ ನಿವಾಸ ಮತ್ತು ಅವರ ಪುತ್ರ ಚೈತನ್ಯ ಬಘೇಲ್ ಅವರ ನಿವಾಸ, ಸೇರಿ ದುರ್ಗ್ ಜಿಲ್ಲೆಯ 14 ಸ್ಥಳಗಳಲ್ಲಿ ಜಾರಿ ನಿರ್ದೇಶನಾಲಯ ಸರಣಿ ದಾಳಿ ನಡೆಸಿತ್ತು.

**508 ಕೋಟಿ ಲಂಚ:** ಮಹದೇವ್ ಬೆಟ್ಟಿಂಗ್ ಆಪ್ ಪ್ರವರ್ತಕರು ಭೂಪೇಶ್ ಬಘೇಲ್ ಅವರಿಗೆ ಸುಮಾರು 508 ಕೋಟಿ ರೂ. ಲಂಚ ನೀಡಿದ್ದಾರೆ ಪುಟ 2

## ಟೋಲ್ ಸುಂಕ ಹೆಚ್ಚಿಸಲು ಮುಂದಾದ ಹೆದ್ದಾರಿ ಪ್ರಾಧಿಕಾರ

# ಏಪ್ರಿಲ್‌ನಿಂದ ಏರಿಕೆ

**ಬೆಂಗಳೂರು:** ಏಪ್ರಿಲ್ 1 ರಿಂದ ಕರ್ನಾಟಕದಾದ್ಯಂತ ಟೋಲ್ ಸುಂಕ ಶೇ 3-5 ರಷ್ಟು ಹೆಚ್ಚಾಗಲಿವೆ. ಈ ನಿಟ್ಟಿನಲ್ಲಿ ಮುಂದಿನ ಕೆಲವೇ ದಿನಗಳಲ್ಲಿ ಅಧಿಸೂಚನೆ ಹೊರಡಿಸಲಾಗುವುದು ಎಂದು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಮೂಲಗಳು ತಿಳಿಸಿವೆ. ಇದರೊಂದಿಗೆ ಕರ್ನಾಟಕದ ವಾಹನ ಸವಾರರಿಗೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಶಾಕ್ ನೀಡಿದಂತಾಗಿದೆ. ಬೆಲೆ ಏರಿಕೆ, ಹಣದುಬ್ಬರಕ್ಕೆ ಅನುಗುಣವಾಗಿ ವಾರ್ಷಿಕವಾಗಿ ಮಾಡುವ ದರ ಪರಿಷ್ಕರಣೆ ಪ್ರಕ್ರಿಯೆಯ ಭಾಗವಾಗಿ ಈಗ ಟೋಲ್ ಸುಂಕ ಹೆಚ್ಚಳಕ್ಕೆ ಎನ್‌ಎಚ್‌ಎಐ ಮುಂದಾಗಿದೆ ಎಂದು ಮೂಲಗಳು ತಿಳಿಸಿವೆ.

**ಎಷ್ಟು ಹೆಚ್ಚಾಗಲಿದೆ ಟೋಲ್ ದರ?:** ರಾಜ್ಯದ 66 ಟೋಲ್ ಪ್ಲಾಜಾಗಳಲ್ಲಿ ಹೆಚ್ಚಿನ ಟೋಲ್‌ಗಳಿಗೆ ಪರಿಷ್ಕೃತ ದರಗಳು ಅನ್ವಯವಾಗಲಿವೆ. ಗರಿಷ್ಠ ಶೇ 5 ರಷ್ಟು ಮತ್ತು ಕನಿಷ್ಠ ಶೇ 3 ರಷ್ಟು ಹೆಚ್ಚಳವಾಗಲಿದೆ ಎಂದು ಎನ್‌ಎಚ್‌ಎಐ ಯ ಬೆಂಗಳೂರಿನ ಯೋಜನಾ ನಿರ್ದೇಶಕ ಕೆಬಿ ಜಯಕುಮಾರ್ ಮಾಹಿತಿ ನೀಡಿದ್ದಾರೆ.

**ಟೋಲ್ ಸುಂಕ ಹೆಚ್ಚವಾಗಲಿರುವ ಮುಖ್ಯ ಟೋಲ್ ಪ್ಲಾಜಾಗಳು ಯಾವುವು?:** ಕರ್ನಾಟಕದಲ್ಲಿ ಸುಮಾರು 66 ಟೋಲ್ ಪ್ಲಾಜಾಗಳಿವೆ. ಟೋಲ್ ಸುಂಕ

ಹೆಚ್ಚಾಗುವ ಟೋಲ್ ಪ್ಲಾಜಾಗಳಲ್ಲಿ ಕಣಿಮಿಣಿಕೆ ಮತ್ತು ಶೇಷಗಿರಿಹಳ್ಳಿ (ಬೆಂಗಳೂರು-ಮೈಸೂರು), ನಂಗ್ಲಿ (ಬೆಂಗಳೂರು-ತಿರುಪತಿ), ಬಾಗೇಪಲ್ಲಿ (ಬೆಂಗಳೂರು-ಹೈದರಾಬಾದ್), ಸಾದಹಳ್ಳಿ (ಬೆಂಗಳೂರು ವಿಮಾನ ನಿಲ್ದಾಣ ರಸ್ತೆ), ಮತ್ತು ಹುಲಿಕುಂಟೆ ಮತ್ತು ನಲ್ಲೂರು ದೇವನಹಳ್ಳಿ (ಸ್ಯಾಟಲೈಟ್ ಟೌನ್ ರಿಂಗ್ ರಸ್ತೆ) ಟೋಲ್ ಪ್ಲಾಜಾಗಳು ಸೇರಿವೆ. ಪುಟ 2

## ಏ.1ರಿಂದ ಆಟೋ ದರ ಏರಿಕೆ ಇಲ್ಲ!

**ಬೆಂಗಳೂರು:** ಬಸ್, ಮೆಟ್ರೋ ದರ ಏರಿಕೆಯಿಂದಾಗಿ ಕಂಗೆಟ್ಟಿರುವ ಬೆಂಗಳೂರಿಗರಿಗೆ ರಿಲ್ಯಾಕ್ಸ್ ಆಗಲಿದ್ದು, ಏ.1ರಿಂದ ಆಟೋ ದರ ಏರಿಕೆಗೆ ತಾತ್ಕಾಲಿಕ ಬ್ರೇಕ್ ಬಿದ್ದಿದೆ.

ಈ ವರ್ಷದ ಆರಂಭದಿಂದಲೂ ನಿತ್ಯ ದರ ಏರಿಕೆ ಸುದ್ದಿ ಕೇಳಿ ಬೆಂಗಳೂರಿಗರು ಬೇಸತ್ತಿದ್ದರು. ಬಸ್, ಮೆಟ್ರೋ ದರ, ನೀರಿನ ದರ ಏರಿಕೆ ಬಳಿಕ ಏ.1ರಿಂದ ಆಟೋ ದರ ಕೂಡ ಏರಿಕೆಯಾಗಲಿದೆ ಎಂದು ಕೇಳಿಬರುತ್ತಿತ್ತು. ಆದರೆ ಇದೀಗ ಆಟೋ ದರ ಏರಿಕೆಗೆ ಜಿಲ್ಲಾಡಳಿತ ತಡೆ ನೀಡಿದೆ. ಪುಟ 2

### ಸರ್ಕಾರದ ವಿರುದ್ಧ ಮತ್ತೆ ಸಮರ ಸಾರಿದ ಸಾರಿಗೆ ನೌಕರರು

## ಹೋರಾಟದ ಎಚ್ಚರಿಕೆ

**ಬೆಂಗಳೂರು:** ಅನಿರ್ದಿಷ್ಟಾವಧಿ ಮುಷ್ಕರಕ್ಕೆ ಕರೆ ನೀಡಿ, ನಂತರ ಸರ್ಕಾರದ ಭರವಸೆಯಿಂದ ತೃಪ್ತರಾಗಿ ಹೋರಾಟದಿಂದ ಹಿಂದೆ ಸರಿದಿದ್ದ ಸಾರಿಗೆ ನೌಕರರು ಇದೀಗ ಮತ್ತೆ ಸಿಡಿದೇಳುವ ಸುಳಿವು ನೀಡಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಈ ಹಿಂದೆ ನೀಡಿದ್ದ ಭರವಸೆಯನ್ನು ಈಡೇರಿಸಿಲ್ಲ. ಮಾತುಕತೆಯನ್ನೂ ನಡೆಸಿಲ್ಲ ಎಂದು ಆರೋಪಿಸಿರುವ ಅವರು, ಸಿಎಂ ಮನೆ ಮುಂದೆ ಧರಣಿ ಸತ್ಯಾಗ್ರಹಕ್ಕೆ ಮುಂದಾಗಿದ್ದಾರೆ. ಈ ಬಗ್ಗೆ ಸಾರಿಗೆ ನೌಕರರ ಜಂಟಿ ಕ್ರಿಯಾ ಸಮಿತಿ ಎಚ್ಚರಿಕೆ ನೀಡಿದೆ.

ಏಪ್ರಿಲ್ 15 ರಂದು ಸಿಎಂ ಸಿದ್ದರಾಮಯ್ಯ ನಿವಾಸದ ಮುಂದೆ ಧರಣಿ ಸತ್ಯಾಗ್ರಹದ ನಡೆಸಲಾಗುವುದು ಎಂದು ಜಂಟಿ ಕ್ರಿಯಾ ಸಮಿತಿ ಹೇಳಿದೆ. ಅಲ್ಲದೆ, ಸಿಎಂ ಸಿದ್ದರಾಮಯ್ಯ ಕೊಟ್ಟ ಮಾತು ತಪ್ಪಿದ್ದಾರೆಂದು ಆಕ್ರೋಶ ವ್ಯಕ್ತಪಡಿಸಿದೆ. ಪುಟ 2

### ಅಪಾರ್ಟ್‌ಮೆಂಟ್‌ನಲ್ಲಿ ಸಿಲಿಂಡರ್ ಬ್ಲಾಸ್ಟ್

## ಮೂವರು ಗಂಭೀರ



**ಬೆಂಗಳೂರು:** ಅಪಾರ್ಟ್‌ಮೆಂಟ್‌ನಲ್ಲಿ ಸಿಲಿಂಡರ್ ಸ್ಫೋಟಗೊಂಡ ಪರಿಣಾಮ ಮನೆಯಲ್ಲಿದ್ದ ಮೂವರು ಗಂಭೀರ ಗಾಯಗೊಂಡ ಘಟನೆ ಪುಲಿಕೇಶಿ ನಗರದ ಡೆವೀಸ್ ರಸ್ತೆಯಲ್ಲಿ ನಡೆದಿದೆ.

ವಿಶ್ರಾಂ ಅಪಾರ್ಟ್‌ಮೆಂಟ್‌ನಲ್ಲಿ ಘಟನೆ ಸಂಭವಿಸಿದೆ. ಸ್ಫೋಟದ ತೀವ್ರತೆಗೆ ಮನೆ ಸಂಪೂರ್ಣ ಜಖ್ಖಂ ಆಗಿದೆ. ಬುಧವಾರ ಮುಂಜಾನೆ 5 ಗಂಟೆಯ ಸುಮಾರಿಗೆ ಘಟನೆ ಸಂಭವಿಸಿದೆ. ಘಟನೆಯಲ್ಲಿ ಸಿದ್ದೇಶ್, ಸಿಲಿಕಾ ಹಾಗೂ ಮತ್ತೊಬ್ಬರು ಗಾಯಗೊಂಡಿದ್ದಾರೆ.

ಬ್ಲಾಸ್ಟ್ ಆದ ಗ್ಯಾಸ್‌ನ ಪೀಸ್ ಕೂಡ ಪತ್ತೆ ಆಗದೆ ಆಗ್ನಿಶಾಮಕ ಸಿಬ್ಬಂದಿ ಹುಡುಕಾಟ ನಡೆಸಿದ್ದಾರೆ. ಸ್ಫೋಟದ ತೀವ್ರತೆಗೆ ಕಿಟಕಿ ಗ್ರಿಲ್‌ಗಳೆಲ್ಲಾ ರಸ್ತೆಗೆ ಬಿದ್ದಿದೆ.

### ಯತೀಂದ್ರ ಸಿದ್ದರಾಮಯ್ಯ ಬಾಂಬ್

## ಬಿಜೆಪಿಯಲ್ಲೇ ಹನಿಟ್ರ್ಯಾಪ್‌ಗಳು ನಡೆದಿವೆ

**ಮೈಸೂರು:** ಬಿಜೆಪಿಯಲ್ಲೇ ಹನಿಟ್ರ್ಯಾಪ್ ಗಳು ನಡೆದಿವೆ. ಬಿಜೆಪಿಯವರ ವಿಡಿಯೋವನ್ನ ಬಿಜೆಪಿಯವರೇ ಮಾಡಿಕೊಂಡು ಇಟ್ಟಿದ್ದಾರೆ ಎಂದು ಎಂಎಲ್‌ಸಿ ಯತೀಂದ್ರ ಸಿದ್ದರಾಮಯ್ಯ ಹೊಸ ಬಾಂಬ್ ಸಿಡಿಸಿದ್ದಾರೆ.

ಮೈಸೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಬಿಜೆಪಿಯಲ್ಲೇ ಹನಿಟ್ರ್ಯಾಪ್ ಗಳು ನಡೆದಿವೆ. ಹೀಗಾಗಿಯೇ ಬಿಜೆಪಿ ಶಾಸಕರು, ಮಾಜಿ ಸಿಎಂ ಕೋರ್ಟ್‌ನಲ್ಲಿ ಸ್ಟೇ ತಂದಿದ್ದಾರೆ. ಹೀಗಿರುವಾಗ ಬಿಜೆಪಿಯವರಿಗೆ ನಮ್ಮ ನಾಯಕರ ಬಗ್ಗೆ ಮಾತನಾಡಲು ಏನು ಹಕ್ಕಿದೆ ಎಂದು ಪ್ರಶ್ನೆ ಮಾಡಿದ್ದಾರೆ.

ಸಚಿವರ ಮನೆಗೆ ಸಿಸಿಟಿವಿ ಹಾಕದ ವಿಚಾರಕ್ಕೆ ಪ್ರತಿಕ್ರಿಯಿಸಿ, ಕೆಲವರು ಹನಿಟ್ರ್ಯಾಪ್ ಮಾಡಲೆಂದೇ ಸಚಿವರ ಮನೆಗೆ ಬರುತ್ತಾರೆ. ಈಗಾಗಿ ಸಿಸಿಟಿವಿ ಹಾಕಿಸಬೇಕು. ಸಚಿವರ ಮನೆಗಳಿಗೆ ಸಿಸಿಟಿವಿ ಇಲ್ಲದ ವಿಚಾರ ನನಗೆ ಗೊತ್ತಿಲ್ಲ. ಆದ್ರೆ ಸಿಎಂ ಮನೆಗೆ ಸಿಸಿಟಿವಿ ಇದೆ. ನಾನು ಅಲ್ಲೇ ಇರುವುದರಿಂದ ಸಿಸಿಟಿವಿ ಇರುವ ಬಗ್ಗೆ ನನಗೆ ಗೊತ್ತಿದೆ, ಬೇರೆಯವರ ಮನೆಯ ವಿಚಾರ ನನಗೆ ಗೊತ್ತಿಲ್ಲ ಎಂದು ಹೇಳಿದ್ದಾರೆ.

ಸಿಎಂ ಮನೆಗೆ ಪೊಲೀಸ್ ಬಂದೋಬಸ್ತ್ ಸಹ ಇದೆ, ಯಾರೇ ಬಂದರೂ ರೆಕಾರ್ಡ್ ಆಗುತ್ತೆ. ಸಚಿವರ ಮನೆಗೆ ಖಂಡಿತವಾಗಿ ಸಿಸಿಟಿವಿ ಹಾಕಬೇಕು. ಸಿಸಿಟಿವಿ ಇದ್ದರೇ ಹನಿ ಟ್ರ್ಯಾಪ್ ಮಾಡುವವರ ಮೇಲೆ ಕಣ್ಣಿಡಬಹುದು ಎಂದಿದ್ದಾರೆ. ಇನ್ನೂ ಸದನದಲ್ಲಿ ಕಾಂಗ್ರೆಸ್ ನಾಯಕರು ಯತ್ನಾಳಗೆ ಚೀಟಿ ಕೊಟ್ಟ ವಿಚಾರ ಕುರಿತು ಮಾತನಾಡಿ, ಚೀಟಿ ಕೊಟ್ಟಿದ್ದು ಯಾರು ಎಂಬುದು ಗೊತ್ತಿಲ್ಲ. ನಮ್ಮ ನಾಯಕರು ಸದನದಲ್ಲಿ ಮಾತನಾಡಿರೋದು ಮಾತ್ರ ಗೊತ್ತಿದೆ. ಅದರ ಬಗ್ಗೆ ಮಾತ್ರ ನಾನು ಮಾತನಾಡುತ್ತೇನೆ ಎಂದು ಹೇಳಿದ್ದಾರೆ.

ಸಂವಿಧಾನ ಬದಲಾವಣೆ ವಿಚಾರವಾಗಿ ಡಿಸಿಎಂ ಡಿ.ಕೆ.ಶಿವಕುಮಾರ್ ಹೇಳಿಕೆ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಯತೀಂದ್ರ ಅವರು, ಬಿಜೆಪಿಯವರಿಗೆ ಏನು ವಿಷಯ ಇಲ್ಲ. ಡಿ.ಕೆ.ಶಿವಕುಮಾರ್ ಅವರು ಈಗಾಗಲೇ ಸ್ಪಷ್ಟನೆ ಕೊಟ್ಟಿದ್ದಾರೆ. ಇಂಗ್ಲಿಷ್ ಅವರ ಮಾತೃ ಭಾಷೆ ಅಲ್ಲ. ಆದ್ದರಿಂದ ಅವರು ಹೇಳಬೇಕಾದ ವಿಚಾರ ಸರಿಯಾಗಿ ಹೇಳಲು ಆಗಿಲ್ಲ ಅಷ್ಟೆ. ಸಂವಿಧಾನ ರಕ್ಷಣೆ ಮಾಡಲು ಕಾಂಗ್ರೆಸ್ ಹೋರಾಟ ಮಾಡಿಕೊಂಡು ಬಂದಿದೆ. ನಾವು ಸಂವಿಧಾನ ಬದಲಾಯಿಸುವ ಪ್ರಯತ್ನ ಮಾಡಲ್ಲ. ಸಂವಿಧಾನ ಬದಲಾವಣೆ ವಿಚಾರವಾಗಿ ಬಿಜೆಪಿ ಅವರು ಹೇಳಿಕೆ ಕೊಟ್ಟ ಮೇಲೆ ಸ್ಪಷ್ಟನೆ ಕೊಟ್ಟಿಲ್ಲ. ಅನಂತ್ ಕುಮಾರ್ ಹೆಗಡೆ ಹೇಳಿಕೆ ಕೊಟ್ಟ ನಂತರ ಸ್ಪಷ್ಟನೆ ಕೊಡುವ ಕೆಲಸ ಮಾಡಿಲ್ಲ. ಆದರೆ ಡಿಕೆಶಿ ಸ್ಪಷ್ಟನೆಕೊಟ್ಟಿದ್ದಾರೆ. ಆದ್ರೆ ಬಿಜೆಪಿಯವರಿಗೆ ಕೆಲಸ ಇಲ್ಲದೆ ಈ ರೀತಿ ಮಾಡುತ್ತಿದ್ದಾರೆ ಎಂದು ತೀವ್ರ ಆಕ್ರೋಶ ಹೊರಹಾಕಿದ್ದಾರೆ.

## ತುಂಗಭದ್ರೆಯ ಒಡಲು ಖಾಲಿ ಖಾಲಿ

## ಪವಿತ್ರ ನದಿಗೆ ಕಲುಷಿತ ನೀರು

**ದಾವಣಗೆರೆ:** ದಾವಣಗೆರೆ ಜಿಲ್ಲೆಯ ತುಂಗಭದ್ರಾ ನದಿ ಬತ್ತುತ್ತಿದೆ. ನದಿಯಲ್ಲಿ ಕೇವಲ 25% ನೀರಿದ್ದು, 60ಕ್ಕೂ ಹೆಚ್ಚು ಹಳ್ಳಿಗಳು ಮತ್ತು ದಾವಣಗೆರೆ ನಗರಕ್ಕೆ ನೀರಿನ ಸಮಸ್ಯೆ ಎದುರಾಗಿದೆ. ಈ ಮಧ್ಯೆ ನದಿಗೆ ಚರಂಡಿ ನೀರು ಸೇರುತ್ತಿರುವುದು. ಇದು ಜನರಲ್ಲಿ ಆತಂಕಕ್ಕೆ ಕಾರಣವಾಗಿದೆ. ಮುಂದಿನ ದಿನಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಹೆಚ್ಚಾಗುವ ಸಾಧ್ಯತೆಯಿದೆ.

ಇನ್ನು ಬೇಸಿಗೆ ಆರಂಭವಾಗಿಲ್ಲ. ಆದರೂ ಸಹ ತುಂಗಭದ್ರೆಯ ಒಡಲು ಖಾಲಿಯಾಗಿದೆ. ಆ ಮೂಲಕ ಕುಡಿಯುವ ನೀರಿಗಾಗಿ ಆಹಾಕಾರದ ಸೂಚನೆ ಖಚಿತವಾಗಿದೆ. ಹತ್ತಾರು ಕಡೆಗಳಿಂದ ಪುಣ್ಯ ಸ್ನಾನಕ್ಕೆ ಬರುವ ಜನ, ನದಿ ಪಾತ್ರದ ಅರ್ಧದವರೆಗೆ ನಡೆದುಕೊಂಡು ಹೋಗುವಂತಾಗಿದೆ. ಇಂತಹ ಪವಿತ್ರ ನೀರಿಗೆ ಚರಂಡಿ ನೀರು ಬೇರೆ ಸೇರಿಕೊಳ್ಳುತ್ತಿದೆ. ಪುಟ 2